# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 621 (756) |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 20/12/2021 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರದಲ್ಲಿ 2018 ರಲ್ಲಿ ಪ್ರಾರಂಭವಾದ ಸರ್ಕಾರಿ ಇಂಜನಿಯರಿಂಗ್ ಮಹಾವಿದ್ಯಾಲಯದ ಕಟ್ಟಡಕ್ಕಾಗಿ ಎಷ್ಟು ಹಣ ಬಿಡುಗಡೆಯಾಗಿದೆ; ಇನ್ನೂ ಬಾಕಿ ಇರುವುದೆಷ್ಟು; ಕಟ್ಟಡ ಕಾಮಗಾರಿ ಮುಗಿಯುವುದು ಯಾವಾಗ: | ಬೀದರ್‌ನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಾಮಗಾರಿಗೆ ರಾಜ್ಯವಲಯದಿಂದ ರೂ.3800.00 ಲಕ್ಷ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರೂ.2000.00 ಲಕ್ಷ ಒಟ್ಟು ಅಂದಾಜು ವೆಚ್ಚ ರೂ.5800.00 ಲಕ್ಷಗಳಿಗೆ ಮಂಜೂರಾತಿ ನೀಡಿದ್ದು, ಈವರೆಗೂ ರಾಜ್ಯ ವಲಯದಿಂದ ರೂ.3800.00 ಲಕ್ಷ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರೂ.500.00 ಲಕ್ಷ ಒಟ್ಟು ರೂ.4300.00 ಲಕ್ಷಗಳು ಬಿಡುಗಡೆಗೊಂಡಿರುತ್ತದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರೂ.1500.00 ಲಕ್ಷಗಳು ಬಾಕಿಯಿರುತ್ತದೆ.<br><br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಸ್ತುತ ಅಂದಾಜು ಶೇಕಡಾ 80 ರಷ್ಟು ಪೂರ್ಣಗೊಂಡಿದ್ದು, 2022ನೇ ಮೇ ತಿಂಗಳ ಅಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. |
| ಆ) | AICTE ಅನುಮತಿ ಪಡೆದು ಬರುವ ಶೈಕ್ಷಣಿಕ ವರ್ಷದಲ್ಲಿ ಈ ಮಹಾವಿದ್ಯಾಲಯ ಪ್ರಾರಂಭಸಲಾಗುವುದೇಯೇ; ಇಲ್ಲವಾದಲ್ಲಿ. ಇದಕ್ಕೆ ಸೂಕ್ತವಾದ ಕಾರಣ ನೀಡುವುದು: | ಎ.ಐ.ಸಿ.ಟಿ.ಇ.ಯ ಮಾರ್ಗಸೂಚಿಗಳ ಪ್ರಕಾರ ಕಟ್ಟಡ ಹಾಗೂ ಇತರೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿದ ನಂತರ ಎಐಸಿಟಿಇ ಯು ಪರಿಶೀಲಿಸಿ ಕಾಲೇಜನ್ನು ಪ್ರಾರಂಭಿಸಲು ಅನುಮತಿ ನೀಡುತ್ತದೆ. |

| | | |
|---|---|---|
| ಇ) | ನಿಗದಿತ ಸಮಯಕ್ಕೆ ಕಟ್ಟಡ ಕಾಮಗಾರಿ ಮುಗಿಸಲು ಯಾವ ಸರ್ಕಾರದಿಂದ ಯಾವ ಸೂಚನೆ ನೀಡಲಾಗಿದೆ: ಮಾರ್ಚ್ 2023 ರಂದು ಈ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಸ್ತುತ ಅಂದಾಜು ಶೇಕಡಾ 80 ರಷ್ಟು ಪೂರ್ಣಗೊಂಡಿದ್ದು, 2022ನೇ ಮೇ ತಿಂಗಳ ಅಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳುವ ನಿರೀಕ್ಷೆ ಇದೆ. |

ಸಂಖ್ಯೆ: ಇಡಿ 99 ಹೆಚ್‌ಪಿಟಿ 2021)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.